ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಕಂದಾಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಟೈಮ್ಸ್ ದಿನಾಂಕ : DATE 20/8/2020

# 'ಅಧಿವೇಶನದವರೆಗೂ ಭೂ ಸುಧಾರಣೆ ಕಾಯ್ದೆ ಜಾರಿ ಬೇಡ'

ಬೆಂಗಳೂರು: ವಿಧಾನ ಮಂಡಲದ ಅಧಿವೇಶನದಲ್ಲಿ ಚರ್ಚೆಯಾಗುವ ಮೊದಲು ಭೂ ಸುಧಾರಣಾ ತಿದ್ದುಪಡಿ ಕಾಯ್ದೆಯನ್ನು ರಾಜ್ಯ ಸರ್ಕಾರ ಅನುಷ್ಠಾನ ಮಾಡಬಾರದು ಎಂದು



ಮಾಜಿ ಸಚಿವ ಎಚ್.ಕೆ.ಪಾಟೀಲ್ ಹೇಳಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿ, ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಮೂಲಕ ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ತಂದಿದೆ. ಉಳುವವನಿಂದ ಭೂಮಿ ಕಿತ್ತು ಉಳ್ಳವನಿಗೆ ನೀಡಿದೆ. ಈಗ ರೈತರು ಆರ್ಥಿಕವಾಗಿ ಸಂಕಷ್ಟದಲ್ಲಿದ್ದಾರೆ. ಇದನ್ನೇ ದುರ್ಬಳಕೆ ಮಾಡಿಕೊಳ್ಳುವ ಪ್ರಯತ್ನ ನಡೆದಿದೆ. ಕಾಂಗ್ರೆಸ್ ಪಕ್ಷ ಇದನ್ನು ವಿರೋಧಿಸಿದೆ ಎಂದರು. ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಜಮೀನು ಖರೀದಿಸಿರುವ ಸುಮಾರು 8 ಸಾವಿರ ಪ್ರಕರಣಗಳಿವೆ. ಅವುಗಳನ್ನು ಸಕ್ರಮ ಗೊಳಿಸಲು ಸರ್ಕಾರ ಈ ತಿದ್ದುಪಡಿ ತಂದಿದೆ. ಸುಗ್ರೀವಾಜ್ಞೆ ಮೂಲಕ ರೈತರ ಹೊಲ ಮಾರಲು ಅವಕಾಶ ಕೊಟ್ಟಿದ್ದಾರೆ. ಸರ್ಕಾರ ತಿದ್ದುಪಡಿ ಆದೇಶ ಹೊರಡಿಸಿದರೂ ಅಧಿವೇಶನ ದವರೆಗೂ ಹಿಂಪಡೆಯಬೇಕು ಎಂದು ಆಗ್ರಹಿಸಿದರು.